# ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಡಗಲಿ.

**ಸಿ.ಸಿ. ನಂಃ 21/2019**

**ಸಿ.ಡಬ್ಲೂಃ 10 ಪಿಡಬ್ಲೂಃ 06**

ಸಾಕ್ಷಿದಾರರ ಹೆಸರುಃ ಪರಮೇಶ್ವರಪ್ಪ ತಂದೆಃಮಲ್ಲೇಶಪ್ಪ
ವಯಸ್ಸುಃ 66 ವರ್ಷ
ಉದ್ಯೋಗಃ ನಿವೃತ್ತ ಪೊಲೀಸ್ ಮುಖ್ಯಪೇದೆ.
ಸಾಕೀನಃ ಕೊಂಡೇನಹಳ್ಳಿ ಹ.ಬೋ.ಹಳ್ಳಿ ತಾಃ

ದಿಃ **25-05-2026** ರಂದು ಸಾಕ್ಷಿಗೆ ಸತ್ಯ ಪ್ರತಿಜ್ಞೆ ಭೋಧಿಸಲಾಯಿತು.

ಮುಖ್ಯ ವಿಚಾರಣೆಃ ಸ.ಸ.ಅ ರವರಿಂದ ;

**ನಾನು 2015 ರಿಂದ 2019 ರವರೆಗೆ ಹಿರೇಹಡಗಲಿ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕೆಲಸ ಮಾಡಿರುತ್ತೇನೆ.**

**02.** ಸದರಿ ಪ್ರಕರಣದಲ್ಲಿ ದಿಃ **27-08-2017** ರಂದು ರಾತ್ರಿ **08.00** ಗಂಟೆಗೆ ಸುಮಾರಿಗೆ ನಾನು ಠಾಣಾ ಕರ್ತವ್ಯದಲ್ಲಿದ್ದಾಗ ಚಾಸಾ-11 ರವರು ಠಾಣೆಗೆ ಹಾಜರಾಗಿ ನೀಡಿದ ಗಣಕೀಕೃತ ದೂರು, ಮತ್ತು ಪಂಚನಾಮೆ ಮುದ್ದೆ ಮಾಲನ್ನು ಹಾಜರುಪಡಿಸಿ, ನೀಡಿದ ದೂರಿ ಸಾರಾಂಶದಂತೆ ಠಾಣೆ ಗುನ್ನ ಸಂಖ್ಯೆ 161/2017 ರಂತೆ ಪ್ರಕರಣವನ್ನು ದಾಖಲಿಕೊಂಡು ಪ್ರ.ವ. ವರದಿಯನ್ನು ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಚಾಸಾ-11 ರವರು ಹಾಜರು ಪಡಿಸಿದ್ದ ಮದ್ಯದ ಪೌಚ್ ಗಳನ್ನು ಠಾಣಾ ಸ್ವತ್ತು ಪಟ್ಟಿ ಸಂಖ್ಯೆ 161/2017 ರಂತೆ ಅಳವಡಿಸಿ ಮಾನ್ಯ ನ್ಯಾಯಲಕ್ಕೆ ನಿವೇದಿಸಿಕೊಂಡಿರುತ್ತೇನೆ. ಅದೇ ದಿನ ಚಾ.ಸಾ.2 ರಿಂದ 05 ಮತ್ತು 08 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ದಿ.26-10-2017 ರಂದು ಈ ಪ್ರಕರಣದ ಆರೋಪಿತರು ಮಾನ್ಯ 3 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಹೊಸಪೇಟೆ ನ್ಯಾಯಾಲಯದಿಂದ ನಿರೀಕ್ಷಣಾ ಜಾಮೀನಿನೊಂದಿಗೆ ಠಾಣೆಗೆ ಹಾಜರಾಗಿದ್ದರಿಂದ ಅವರ ವಿರುದ್ಧ ನಿಯಮನುಸಾರ ಕ್ರಮ ಕೈಗೊಂಡು ಠಾಣಾ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ಅದೇ ದಿನ ಆರೋಪಿತರಿದ ಸ್ವ ಕುಷಿ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಅದೇ ದಿನ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ,ಸಾ.11 ರವರಿಗೆ ವಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು ಚಾ.ಸಾ.11 ರವರು ನೀಡಿದ ಗಣಕೀಕೃತ ದೂರನ್ನು ನೋಡಿ ಗುರುತಿಸಿದ್ದರಿಂದ ಅದನ್ನು

ನಿ.ಪಿ.**03** ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.**03** ಎ. ಎಂದು ಗುರುತಿಸಲಾಯಿತು, ಸಾಕ್ಷಿಯು ಪ್ರ.ವ ವರದಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿ.ಪಿ.**04** ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.**04** ಎ. ಎಂದು ಗುರುತಿಸಲಾಯಿತು, ಸಾಕ್ಷಿಯು ಠಾಣಾ ಸ್ವತ್ತು ಪಟ್ಟಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿ.ಪಿ.**05** ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.**05** ಎ. ಎಂದು ಗುರುತಿಸಲಾಯಿತು, ಸಾಕ್ಷಿಯು **1** ಮತ್ತು **2** ನೇ ಆರೋಪಿತರ ಸ್ವ ಕುಷಿ ಹೇಳಿಕೆಗಳನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿ.ಪಿ.**06** ಮತ್ತು **07** ಎಂದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿ.ಪಿ.**06** ಎ ಮತ್ತು ನಿ.ಪಿ.**07** ಎ. ಎಂದು ಗುರುತಿಸಲಾಯಿತು, ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು.ಮಾ.**01** ಮತ್ತು **2** ನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ಇಂದು ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

ಪಾಟೀ ಸವಾಲುಃ ಆರೋಪಿತರ ಪರ ಶ್ರೀ.**KK** ವಕೀಲರಿಂದಃ ಃ

**03.** ಚಾ.ಸಾ.**11** ರವರು ನೀಡಿದ ದೂರನ್ನು ಗಣಕೀಕೃತ ಮಾಡಿದವರ ಹೇಳಿಕೆಯನ್ನು ಪಡೆದಿರುತ್ತೇನೆ. ಗಣಕೀಕೃತ ಮಾಡಿದವರು ಗೌಡ ಎನ್ನುವವರು ಆಗಿರುತ್ತಾರೆ. ಆ ದಿನ ಚಾ.ಸಾ.**11** ರವರು ನೀಡಿದ ಗಣಕೀಕೃತ ದೂರು, ಪಂಚನಾಮೆ ಮತ್ತು ಮಧ್ಯದ ಪೌಚಗಳನ್ನು ಪಡೆದಿರುತ್ತೇನೆ ಎನ್ನುವ ಮಾತು ಸುಳ್ಳು ಎಂದರೆ ಸರಿಯಲ್ಲ. ಯಾವುದೇ ಸಾಕ್ಷಿದಾರರ ಹೇಳಿಕೆ ಪಡೆದಿರುತ್ತೇನೆ ಎನ್ನುವ ಮಾತು ಸುಳ್ಳು ಎಂದರೆ ಸರಿಯಲ್ಲ. ಇಬ್ಬರು ಆರೋಪಿತರು ಅವರ ಸ್ವ ಕುಷಿ ಹೇಳಿಕೆಯನ್ನು ನೀಡಿರುತ್ತಾರೆ ಎನ್ನುವ ಮಾತು ಸುಳ್ಳು ಎಂದರೆ ಸರಿಯಲ್ಲ. ಈ ಪ್ರಕರಣದ ಕಡತವನ್ನು ಚಾ.ಸಾ.**11** ರವರಿಗೆ ಮುಂದಿನ ತನಿಖೆಗಾಗಿ ನೀಡಿರುತ್ತೇನೆ ಎನ್ನುವ ಮಾತು ಸುಳ್ಳು ಎಂದರೆ ಸರಿಯಲ್ಲ. ನನ್ನ ಮುಖ್ಯವಿಚಾರಣೆಯಲ್ಲಿ ಹೇಳಿರುವ ಎಲ್ಲಾ ಸಂಗತಿಗಳು ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ಆರೋಪಿತರು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಅಂಕಿಸಂಖ್ಯೆಗೋಸ್ಕರ ಸುಳ್ಳು ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ.

(ಸಾಕ್ಷಿಯು ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ, " ನನ್ನ ಸಮಕ್ಷಮ "

Sd/-
(ಶ್ರೀಮತಿ.ಅಕ್ಷತಾ ಟಿ .)
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು., ಹಡಗಲಿ.